# ಹಿಂಬರಹ

ಸಂಖ್ಯೆ: ಡಿಟಿಇ 01 ಇಎಸ್‌ಟಿ(9) 2015/3446 ದಿನಾಂಕ: 27-1-2016

ಕರ್ನಾಟಕ ಸರ್ಕಾರದ ನಡವಳಿಗಳು: ದಿನಾಂಕ:19/1/2016 ರ ಸರ್ಕಾರದ ಆದೇಶದ ಪತ್ರ ಸಂಖ್ಯೆ:ಎಫ್‌ಡಿ/1/ಎಸ್‌ಆರ್‌ಪಿ/2016ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೈರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು, [ಆಡಳಿತ], ಆಡಳಿತಾಧಿಕಾರಿ [ಆಡಳಿತ], ರಿಜಿಸ್ಟ್ರಾರ್ [ಆಡಳಿತ], ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3) ಗಳಿಗೆ ಮಾಹಿತಿಗಾಗಿ.
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ
5. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಗಳಿಗೆ ಮಾಹಿತಿಗಾಗಿ.
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

**ಆಡಳಿತಾಧಿಕಾರಿ**

Sh-est(9) Endsmnt

**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ: ಚಲನ ವೈಕಲ್ಯ ಹೊಂದಿರುವ ಮಕ್ಕಳಿರುವ ಸರ್ಕಾರಿ ನೌಕರರಿಗೆ ಪೋಷಣಾ ಭತ್ಯೆಯ ಸೌಲಭ್ಯವನ್ನು ಮಂಜೂರು ಮಾಡುವ ಬಗ್ಗೆ.**

ಓದಲಾಗಿದೆ:

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012 (XII), ದಿನಾಂಕ: 10.06.2013

ಪ್ರಸ್ತಾವನೆ:

2011ರ ಅಧಿಕಾರಿ ವೇತನ ಸಮಿತಿಯ ಶಿಫಾರಸ್ಸಿನನ್ವಯ ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಚಲನ ವೈಕಲ್ಯತೆ ಮತ್ತು ಅಂಗವಿಕಲತೆಯಿಂದಾಗಿ ಮನೆಯಲ್ಲಿಯೇ ಉಳಿದುಕೊಳ್ಳುವ ಹಾಗೂ ಶಾಲೆಗಳಿಗೆ ಹೋಗಲು ಅಸಮರ್ಥರಾಗಿ ಪೋಷಕರ ಮೇಲೆ ಸಂಪೂರ್ಣವಾಗಿ ಅವಲಂಬಿತರಾಗಿರುವ ಸರ್ಕಾರಿ ನೌಕರರ ಮಕ್ಕಳ ಪಾಲನೆ/ಪೋಷಣೆ ಮಾಡುವುದಕ್ಕಾಗಿ ಒಂದು ಮಗುವಿಗೆ ಮಾಸಿಕ ತಲಾ ರೂ.500/-ಗಳ ದರದಲ್ಲಿ ಗರಿಷ್ಠ 2 ಮಕ್ಕಳಿಗೆ ಮಾತ್ರ ಪೋಷಣಾ ಭತ್ಯೆಯನ್ನು ಮಂಜೂರು ಮಾಡಲಾಗಿದೆ.

ಮೇಲೆ ಓದಲಾದ ಆದೇಶದನ್ವಯ "Autism, Cerebral Palsy or Mental retardation" ಹೊಂದಿರುವ ಮಕ್ಕಳ ಪೋಷಣೆಗೆ ಸರ್ಕಾರಿ ನೌಕರರಿಗೆ ಪೋಷಣಾ ಭತ್ಯೆಯನ್ನು ನೀಡಬಹುದೇ ಎಂಬ ಬಗ್ಗೆ ಹಲವು ಇಲಾಖೆಗಳು ಸರ್ಕಾರದ ಸ್ಪಷ್ಟೀಕರಣವನ್ನು ಕೋರಿರುತ್ತವೆ. ಅದನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

ADO/Reg(Ad)/PS

**ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಎಸ್‌ಆರ್‌ಪಿ 2016**
**ಬೆಂಗಳೂರು, ದಿನಾಂಕ: 19.01.2016**

22/1

ದಿನಾಂಕ: 10.06.2013ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012 (XII) ರಡಿಯಲ್ಲಿನ ಪೋಷಣಾ ಭತ್ಯೆಯ ಸೌಲಭ್ಯವು "Autism, Cerebral Palsy or Mental retardation" ಈ ವೈಕಲ್ಯತೆ/ಸಮಸ್ಯೆಗಳಿಂದ ಬಳಲುತ್ತಿದ್ದು, ಶಾಲೆಗಳಿಗೆ ಹೋಗಲು ಅಸಮರ್ಥರಾಗಿ ಪೋಷಕರ ಮೇಲೆ ಸಂಪೂರ್ಣವಾಗಿ ಅವಲಂಬಿತರಾಗಿರುವ ಸರ್ಕಾರಿ ನೌಕರರ ವಿಶೇಷ ಮಕ್ಕಳ ಪೋಷಣೆಗೆ ಅನ್ವಯವಾಗುತ್ತದೆ ಎಂದು ಈ ಮೂಲಕ ಆದೇಶಿಸಿದೆ.

PS-1663
22/1/16

ಉಳಿದಂತೆ, ಪೋಷಣಾ ಭತ್ಯೆಯನ್ನು ನೀಡಲು ವಿಧಿಸಿರುವ ಇತರೆ ಷರತ್ತುಗಳು ಮುಂದುವರೆದು ಅನ್ವಯವಾಗುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್. ರಾಜಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).
19.1.16

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
4. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
5. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
6. ರಿಜಿಸ್ಟ್ರಾರ್ ಜನರಲ್ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
12. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
13. ಎಲ್ಲಾ ಇಲಾಖಾ ಮುಖ್ಯಾಧಿಕಾರಿಗಳು.
14. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
15. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬೆಂಗಳೂರು ನಗರ ಜಿಲ್ಲಾ ಪಂಚಾಯತ್.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.